KA / BG-GPO/2515/WPP-47/2009-2011



ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೪	ಬೆಂಗಳೂರು, ಗುರುವಾರ, ಆಗಸ್ಟ್ ೨೦, ೨೦೦೯ (ಶ್ರಾವಣ ೨೯, ಶಕ ವರ್ಷ ೧೯೩೧)	ಸಂಚಿಕೆ ೩೪

ಭಾಗ – ೪ಎ

ರಾಜ್ಯದ ವಿಧೇಯಕಗಳ ಮತ್ತು ಅವುಗಳ ಮೇಲೆ ಪರಿಶೀಲನಾ ಸಮಿತಿಯ ವರದಿಗಳು, ರಾಜ್ಯದ ಅಧಿನಿಯಮಗಳು ಮತ್ತು ಅಧ್ಯಾದೇಶಗಳು, ಕೇಂದ್ರದ ಮತ್ತು ರಾಜ್ಯದ ಶಾಸನಗಳ ಮೇರೆಗೆ ರಾಜ್ಯ ಸರ್ಕಾರವು ಹೊರಡಿಸಿದ ಸಾಮಾನ್ಯ ಶಾಸನಬದ್ಧ ನಿಯಮಗಳು ಮತ್ತು ರಾಜ್ಯಾಂಗದ ಮೇರೆಗೆ ರಾಜ್ಯಪಾಲರು ಮಾಡಿದ ನಿಯಮಗಳು, ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯವು ಮಾಡಿದ ನಿಯಮಗಳು.

PERSONNEL AND ADMINISTRATIVE REFORMS SECRETARIAT

NOTIFICATION

No. DPAR 51 SHC 2009 , Bangalore, Dated: 29th July, 2009

I, H.R. Bhardwaj, Governor of Karnataka in exercise of the powers conferred on me, under Article 233 of the Constitution of India, hereby appoint the following 3 Ad-hoc District Judges/Civil Judges (Sr. Dn) filling up 25% of the existing vacancies in the cadre of District Judges who have put in not less than 5 years of service strictly on the basis of merit through limited departmental competitive examination in accordance with the guidelines framed by the High Court under the Karnataka Judicial Service (Recruitment) Rules, 2004, with immediate effect:

1. Sri K.B.M. Patel
2. Sri Yogesh Nageshrao Karagudari
3. Smt Manjula

Governor of Karnataka

By Order and in the name of the Governor of Karnataka,

Dr. M.T. REJU

Deputy Secretary to Government,

Department of Personnel and Administrative Reforms (Services)

P.R. 448

NOTIFICATION

No. DPAR 52 SHC 2009 , Bangalore, Dated: 29th July, 2009

I, H.R. Bhardwaj, Governor of Karnataka in exercise of the powers conferred on me, under Article 233 of the Constitution of India, hereby appoint the following 14 Ad-hoc District Judges/Civil Judges (Sr. Dn) filling up 50% of the existing vacancies in the cadre of District Judges by promotion on the basis of seniority-cum-merit under the Karnataka Judicial Service (Recruitment) Rules, 2004, with immediate effect:

Sriyuths:

1	Sangappa N. Gaddi	2.	Basavanahalli Venkatakrishnaiah Prakash
3	Somalingappa Channappa Ingalagi	4	Javid Pasha
5	Mahadevegowda	6	Somnath Revanasiddappa Sindgi
7	Channabasappa V. Margoor	8	M.C. Sachidanda Prasad
9	Sanganna B. Patil	10	H.M. Shivakumara Swamy
11	Belavigi Basavaraj Basappa	12	Solapurkar Ajit Narasinga Rao
13	B.M. Mallikarjunaiah	14	Krishnamurthy B. Sangannavar

Governor of Karnataka

By Order and in the name of the Governor of Karnataka,

Dr. M.T. REJU

P.R. 449

Deputy Secretary to Government,

Department of Personnel and Administrative Reforms (Services)

ಕಂದಾಯ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಕಂಇ 38 ಎಲ್‌ಆರ್‌ಎಂ 2009, ಬೆಂಗಳೂರು, ದಿನಾಂಕ: 28ನೇ ಜುಲೈ 2009

ಮೆ:ರಾಂಬೋ ಫ್ಲೋರಾ, ಬೆಂಗಳೂರು, ಇವರು ಉತ್ತರ ಕನ್ನಡ ಜಿಲ್ಲೆ, ಶಿರಸಿ ತಾಲ್ಲೂಕು, ಕಬ್ಬೆ ಗ್ರಾಮದ, ಸರ್ವೆ ನಂ. 23/2 ರಲ್ಲಿ ಕ್ಷೇತ್ರ 4–20–0ಯಲ್ಲಿ 2–0–0 ಜಮೀನನ್ನು ಪುಷ್ಪೋತ್ಪತ್ತಿ ಉದ್ದೇಶಕ್ಕಾಗಿ ನಮೂನೆ 15–ಎ ಮತ್ತು ನಮೂನೆ 15–ಎಎ, ಗಳಲ್ಲಿನ ಮಾಹಿತಿ ಅನುಸರಿಸಿ ಜಿಲ್ಲಾಧಿಕಾರಿಗಳು, ಉತ್ತರ ಕನ್ನಡ ಜಿಲ್ಲೆ, ಕಾರವಾರ, ಇವರ ಪತ್ರ ಸಂಖ್ಯೆ:ಕಂಶಾ/ಭೂಸ್ವಾ/ವಿವ–28/2008–09 ದಿನಾಂಕ:26.2.2009ರ ಪತ್ರದಲ್ಲಿ ಪ್ರಸ್ತಾಪಿತ ಮೇಲ್ಕಂಡ ಗ್ರಾಮದ ಸ.ನಂ. 23/2 ರಲ್ಲಿ 2–0–0 ಕ್ಷೇತ್ರ ಜಮೀನನ್ನು ಖರೀದಿಸಲು ಕರ್ನಾಟಕ ಭೂಸುಧಾರಣೆ ಅಧಿನಿಯಮ, 1961ರ ಕಲಂ 109 (1ಎ) ರಡಿ ಅನುಮೋದನೆ/ವಿನಾಯಿತಿ ನೀಡಲು ಶಿಫಾರಸ್ಸು ಮಾಡಿರುತ್ತಾರೆ.

ಪ್ರಸ್ತಾಪಿತ ಜಮೀನು ಖರೀದಿಸಲು ಖಾತೆದಾರರಿಂದ ಕರಾರು ಪತ್ರ ಮಾಡಿಕೊಂಡಿರುತ್ತಾರೆ ಹಾಗೂ ಸದರಿ ಜಮೀನು ಕರ್ನಾಟಕ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ (ಪಿ.ಟಿ.ಸಿ.ಎಲ್) ಅಧಿನಿಯಮ 1978, ಕರ್ನಾಟಕ ಭೂ ಮಂಜೂರಾತಿ ನಿಯಮಾವಳಿಗಳು ಹಾಗೂ ಇನ್ನಿತರ ಪರಭಾರೆ, ನಿಷೇಧ ಕಾಯ್ದೆಗಳ ವ್ಯಾಪ್ತಿಗೆ ಒಳಪಡುವುದಿಲ್ಲ.

ರಾಜ್ಯ ಸರ್ಕಾರವು ಸಾರ್ವಜನಿಕ ಹಿತಾಸಕ್ತಿಯ ಮೇಲೆ ಕಾರಣಗಳನ್ನು ದಾಖಲಿಸಿ ನಿರ್ದಿಷ್ಟ ಉದ್ದೇಶಕ್ಕಾಗಿ ಎಷ್ಟೇ ವಿಸ್ತೀರ್ಣದ ಭೂಮಿಯನ್ನು ಷರತ್ತು ಮತ್ತು ನಿರ್ಬಂಧನೆಗಳನ್ನು ವಿಧಿಸಿ ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961ರ ಕಲಂ 63, 79ಎ, 79ಬಿ ಅಥವಾ 80ರ ಅವಕಾಶಗಳಿಂದ ವಿನಾಯಿತಿ ನೀಡಲು ಸದರಿ ಅಧಿನಿಯಮದ ಕಲಂ 109(1ಎ) ರಡಿ ಅವಕಾಶ ಕಲ್ಪಿಸಿದೆ.

ಈ ಪ್ರಸ್ತಾವನೆ ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ಅಧಿನಿಯಮ 1995ರ ಕಲಂ 109(1ಎ) ಮತ್ತು ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ನಿಯಮಗಳು, 1996ರ ನಿಯಮ 38–ಬಿ ಮತ್ತು 38–ಸಿ ರಲ್ಲಿನ ಷರತ್ತುಗಳನ್ನು ಪೂರೈಸಿದ್ದು ಕರ್ನಾಟಕ ಭೂ ಸುಧಾರಣೆ ಅಧಿನಿಯಮ 1961ರ ಕಲಂ 63, 79ಎ, 79ಬಿ ಅಥವಾ 80ಕ್ಕೆ ವಿನಾಯಿತಿ ನೀಡಿ ಮೆ:ರಾಂಬೋ ಫ್ಲೋರಾ, ಬೆಂಗಳೂರು, ಇವರು ಉತ್ತರ ಕನ್ನಡ ಜಿಲ್ಲೆ, ಶಿರಸಿ ತಾಲ್ಲೂಕು, ಕಬ್ಬೆ ಗ್ರಾಮದ, ಸರ್ವೆ ನಂ. 23/2 ರಲ್ಲಿ ಕ್ಷೇತ್ರ

4–20–0ಯಲ್ಲಿ 2–0–0 ಜಮೀನನ್ನು ಪುಷ್ಪೋತ್ಪತ್ತಿ ಉದ್ದೇಶಕ್ಕಾಗಿ ಖರೀದಿಸಲು ಕರ್ನಾಟಕ ಭೂ ಸುಧಾರಣೆ ಕಾಯ್ದೆ 1961ರ ಕಲಂ 109(1ಎ) ರಡಿ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟಂತೆ ಸರ್ಕಾರದ ಅನುಮತಿ ನೀಡಲಾಗಿದೆ.

1 ಯಾವ ಉದ್ದೇಶಕ್ಕಾಗಿ ಜಮೀನನ್ನು ಖರೀದಿಸಲು ಅನುಮತಿ ನೀಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಸದರಿ ಜಮೀನನ್ನು ಎರಡು ವರ್ಷಗಳೊಳಗಾಗಿ ಉಪಯೋಗಿಸತಕ್ಕದ್ದು ಮತ್ತು ಆ ಬಗ್ಗೆ ಜಿಲ್ಲಾಧಿಕಾರಿಗಳ ಮುಖಾಂತರ ಸರ್ಕಾರಕ್ಕೆ ಲಿಖಿತವಾಗಿ ಮಾಹಿತಿ ನೀಡತಕ್ಕದ್ದು.

2. ವಿನಾಯಿತಿ ಪಡೆದವರು ಸರ್ಕಾರ ಅಥವಾ ಯಾವುದೇ ಷೆಡ್ಯೂಲ್ ಬ್ಯಾಂಕ್ ಅಥವಾ ಸಹಕಾರಿ, ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಒಂದಕ್ಕೆ ಅಥವಾ ಕಂಪನಿ ಕಾಯ್ದೆ 1956ರ ಕಲಂ 3ರಲ್ಲಿ ಹೇಳಿರುವಂತೆ ಶೇಕಡ 51 ಪೇಯ್ಡ್ ಆಫ್ ಷೇರು ಬಂಡವಾಳ ಹೊಂದಿದ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದ ನಿಯಂತ್ರಿತ ಅಥವಾ ಎರಡರ ಹಿಡಿತ ಹೊಂದಿರುವ ಸರ್ಕಾರದ ಸಂಘ/ಸಂಸ್ಥೆ ಒಂದಕ್ಕೆ ಖಾತರಿ ನೀಡಿ ಅಡಮಾನ ಹಾಗೂ ಇತರೆ ಹೊಣೆ ಮಾಡಿ ಸಾಲ ಪಡೆಯುವುದನ್ನು ಹೊರತುಪಡಿಸಿ ಸದರಿ ಜಮೀನನ್ನು ನಿಗದಿತ ಉದ್ದೇಶಕ್ಕಲ್ಲದೆ ಬೇರೆ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.

3. ಜಮೀನು ನಗರಾಭಿವೃದ್ಧಿ ಪ್ರಾಧಿಕಾರದ ಸಿ.ಡಿ.ಪಿ/ಒ.ಡಿ.ಪಿ. ವ್ಯಾಪ್ತಿಯೊಳಗೆ ಬಂದರೆ, ಅದರಂತೆ ಅನುಮತಿ ಪಡೆದು ಉಪಯೋಗಿಸತಕ್ಕದ್ದು.

4. ಈ ಅನುಮತಿಯು ಕರ್ನಾಟಕ ಭೂಸುಧಾರಣೆ ಅಧಿನಿಯಮ, 1961ರ ಕಲಂ 109ರನ್ವಯ ವಿನಾಯಿತಿ ಮಾತ್ರವಾಗಿರುತ್ತದೆ. ಬೇರೆ ಕಾನೂನುಗಳ ಉಲ್ಲಂಘನೆಯಾದಲ್ಲಿ ಸಂಬಂಧಿಸಿದ ಕಾಯ್ದೆಯಡಿ ಅಗತ್ಯ ಕ್ರಮ ಜರುಗಿಸಲು ಅವಕಾಶವಿರುತ್ತದೆ.

5. ಈ ಜಮೀನನ್ನು ವ್ಯವಸಾಯದಿಂದ ವ್ಯವಸಾಯೇತರ ಉದ್ದೇಶಕ್ಕಾಗಿ ಪರಿವರ್ತಿಸಿಕೊಳ್ಳಲು ಕರ್ನಾಟಕ ಭೂ ಕಂದಾಯ ಅಧಿನಿಯಮ. 1964ರ ಕಲಂ 95ರಂತೆ ಜಿಲ್ಲಾಧಿಕಾರಿಗಳಿಂದ ಅನುಮತಿ ಪಡೆಯತಕ್ಕದ್ದು.

6. ಸಂಸ್ಥೆ ನಡೆಸುವ ಚಟುವಟಿಕೆಗಳು ಸ್ಥಳೀಯ ಕಾನೂನು, ಕರ್ನಾಟಕ ಮತ್ತು ಭಾರತದ ಕಾನೂನುಗಳನ್ನು ಪಾಲಿಸತಕ್ಕದ್ದು.

7. ಪ್ರಸ್ತಾಪಿತ ಜಮೀನುಗಳಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಮೊದಲು ಜಮೀನಿನ ವಿನ್ಯಾಸಕ್ಕೆ ನಗರ ಯೋಜನಾ ಇಲಾಖೆ/ಅಭಿವೃದ್ಧಿ ಪ್ರಾಧಿಕಾರ/ಸ್ಥಳೀಯ ಪ್ರಾಧಿಕಾರಗಳಿಂದ ಅನುಮೋದನೆ ಪಡೆಯತಕ್ಕದ್ದು.

8. ಮೇಲಿನ ಷರತ್ತುಗಳು ಉಲ್ಲಂಘನೆಯಾದಲ್ಲಿ ಈಗ ನೀಡಲಾಗಿರುವ ಅನುಮತಿಯನ್ನು ಕಾನೂನು ರೀತ್ಯ ರದ್ದುಪಡಿಸಲಾಗುವುದು ಮತ್ತು ಪ್ರಸ್ತಾಪಿತ ಭೂಮಿಯನ್ನು ಋಣಮುಕ್ತವಾಗಿ ಸರ್ಕಾರದಲ್ಲಿ ನಿಹಿತ ಮಾಡಿಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಟಿ.ಎನ್. ನಾರಾಯಣ ಗೌಡ

ಪಿ.ಆರ್. 450

ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಭೂ ಸುಧಾರಣೆ)

ಅಧಿಸೂಚನೆ

ಸಂಖ್ಯೆ: ಕಂಇ 39 ಎಲ್ಆರ್ಎಂ 2009, ಬೆಂಗಳೂರು, ದಿನಾಂಕ: 28ನೇ ಜುಲೈ 2009

ಸ್ವಾಮಿ ವಿವೇಕಾನಂದ ಯೂತ್ ಮೂವ್ ಮೆಂಟ್, ಮೈಸೂರು, ಇವರು ಹೆಚ್.ಡಿ. ಕೋಟೆ ತಾಲ್ಲೂಕಿನ ಸರಗೂರು ಗ್ರಾಮದ ಸ.ನಂ. 186/2 ರಲ್ಲಿ 2 ಎಕರೆ 19 ಗುಂಟೆ ಕೃಷಿ ಜಮೀನನ್ನು ಶೈಕ್ಷಣಿಕ ಉದ್ದೇಶಕ್ಕಾಗಿ ಪಡೆಯಲು ನಮೂನೆ 15–ಎ ಮತ್ತು ನಮೂನೆ15–ಎಎ, ಗಳಲ್ಲಿನ ಮಾಹಿತಿ ಅನುಸರಿಸಿ ಜಿಲ್ಲಾಧಿಕಾರಿಗಳು, ಮೈಸೂರು ಜಿಲ್ಲೆ, ಇವರ ಪತ್ರ ಸಂಖ್ಯೆ:ಎಲ್ಆರ್ ಎಫ್/ಎಸ್ಪಿಎಲ್/20/2008–09 ದಿನಾಂಕ:3.3.2009ರಲ್ಲಿ ಪ್ರಸ್ತಾಪಿತ ಮೇಲ್ಕಂಡ 2 ಎಕರೆ 19 ಗುಂಟೆ ಕೃಷಿ ಜಮೀನನ್ನು ಪಡೆಯಲು ಕರ್ನಾಟಕ ಭೂಸುಧಾರಣೆ ಅಧಿನಿಯಮ, 1961ರ ಕಲಂ 109 ರಡಿ ಅನುಮೋದನೆ/ವಿನಾಯಿತಿ ನೀಡುವ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾಪಿತ ಜಮೀನು ಖರೀದಿಸಲು ಖಾತೆದಾರರಿಂದ ಕರಾರು ಪತ್ರ ಮಾಡಿಕೊಂಡಿರುತ್ತಾರೆ ಹಾಗೂ ಸದರಿ ಜಮೀನು ಕರ್ನಾಟಕ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ (ಪಿ.ಟಿ.ಸಿ.ಎಲ್) ಅಧಿನಿಯಮ 1978, ಕರ್ನಾಟಕ ಭೂ ಮಂಜೂರಾತಿ ನಿಯಮಾವಳಿಗಳು ಹಾಗೂ ಇನ್ನಿತರ ಪರಭಾರೆ, ನಿಷೇಧ ಕಾಯ್ದೆಗಳ ವ್ಯಾಪ್ತಿಗೆ ಒಳಪಡುವುದಿಲ್ಲ.

ರಾಜ್ಯ ಸರ್ಕಾರವು ಸಾರ್ವಜನಿಕ ಹಿತಾಸಕ್ತಿಯ ಮೇಲೆ ಕಾರಣಗಳನ್ನು ದಾಖಲಿಸಿ ನಿರ್ದಿಷ್ಟ ಉದ್ದೇಶಕ್ಕಾಗಿ ಎಷ್ಟೇ ವಿಸ್ತೀರ್ಣದ ಭೂಮಿಯನ್ನು ಷರತ್ತು ಮತ್ತು ನಿರ್ಬಂಧನೆಗಳನ್ನು ವಿಧಿಸಿ ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961ರ

ಕಲಂ 63, 79ಎ, 79ಬಿ ಅಥವಾ 80ರ ಅವಕಾಶಗಳಿಂದ ವಿನಾಯಿತಿ ನೀಡಲು ಸದರಿ ಅಧಿನಿಯಮದ ಕಲಂ 109(1ಎ) ರಡಿ ಅವಕಾಶ ಕಲ್ಪಿಸಿದೆ.

ಈ ಪ್ರಸ್ತಾವನೆ ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ಅಧಿನಿಯಮ 1995ರ ಕಲಂ 109(1ಎ) ಮತ್ತು ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ನಿಯಮಗಳು, 1996ರ ನಿಯಮ 38–ಬಿ ಮತ್ತು 38–ಸಿ ರಲ್ಲಿನ ಷರತ್ತುಗಳನ್ನು ಪೂರೈಸಿದ್ದು ಕರ್ನಾಟಕ ಭೂ ಸುಧಾರಣೆ ಅಧಿನಿಯಮ 1961ರ ಕಲಂ 63, 79ಎ, 79ಬಿ ಅಥವಾ 80ಕ್ಕೆ ವಿನಾಯಿತಿ ನೀಡಿ ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್, ಮೈಸೂರು, ಇವರು ಹೆಚ್.ಡಿ. ಕೋಟೆ ತಾಲ್ಲೂಕಿನ ಸರಗೂರು ಗ್ರಾಮದ ಸ.ನಂ. 186/2 ರಲ್ಲಿ 2 ಎಕರೆ 19 ಗುಂಟೆ ಕೃಷಿ ಜಮೀನನ್ನು ದಾನ ರೂಪದಲ್ಲಿ ಶೈಕ್ಷಣಿಕ ಉದ್ದೇಶಕ್ಕಾಗಿ ಪಡೆಯಲು ಕರ್ನಾಟಕ ಭೂ ಸುಧಾರಣೆ ಕಾಯ್ದೆ 1961ರ ಕಲಂ 109ರಡಿ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟಂತೆ ಸರ್ಕಾರದ ಅನುಮತಿ ನೀಡಲಾಗಿದೆ.

1 ಯಾವ ಉದ್ದೇಶಕ್ಕಾಗಿ ಜಮೀನನ್ನು ಖರೀದಿಸಲು ಅನುಮತಿ ನೀಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಸದರಿ ಜಮೀನನ್ನು ಎರಡು ವರ್ಷಗಳೊಳಗಾಗಿ ಉಪಯೋಗಿಸತಕ್ಕದ್ದು ಮತ್ತು ಆ ಬಗ್ಗೆ ಜಿಲ್ಲಾಧಿಕಾರಿಗಳ ಮುಖಾಂತರ ಸರ್ಕಾರಕ್ಕೆ ಲಿಖಿತವಾಗಿ ಮಾಹಿತಿ ನೀಡತಕ್ಕದ್ದು.

2. ವಿನಾಯಿತಿ ಪಡೆದವರು ಸರ್ಕಾರ ಅಥವಾ ಯಾವುದೇ ಷೆಡ್ಯೂಲ್ ಬ್ಯಾಂಕ್ ಅಥವಾ ಸಹಕಾರಿ, ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಒಂದಕ್ಕೆ ಅಥವಾ ಕಂಪನಿ ಕಾಯ್ದೆ 1956ರ ಕಲಂ 3ರಲ್ಲಿ ಹೇಳಿರುವಂತೆ ಶೇಕಡ 51 ಪೇಯ್ಡ್ ಆಫ್ ಷೇರು ಬಂಡವಾಳ ಹೊಂದಿದ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದ ನಿಯಂತ್ರಿತ ಅಥವಾ ಎರಡರ ಹಿಡಿತ ಹೊಂದಿರುವ ಸರ್ಕಾರದ ಸಂಘ/ಸಂಸ್ಥೆ ಒಂದಕ್ಕೆ ಖಾತರಿ ನೀಡಿ ಅಡಮಾನ ಹಾಗೂ ಇತರೆ ಹೊಣೆ ಮಾಡಿ ಸಾಲ ಪಡೆಯುವುದನ್ನು ಹೊರತುಪಡಿಸಿ ಸದರಿ ಜಮೀನನ್ನು ನಿಗದಿತ ಉದ್ದೇಶಕ್ಕಲ್ಲದೆ ಬೇರೆ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.

3. ಜಮೀನು ನಗರಾಭಿವೃದ್ಧಿ ಪ್ರಾಧಿಕಾರದ ಸಿ.ಡಿ.ಪಿ/ಒ.ಡಿ.ಪಿ. ವ್ಯಾಪ್ತಿಯೊಳಗೆ ಬಂದರೆ, ಅದರಂತೆ ಅನುಮತಿ ಪಡೆದು ಉಪಯೋಗಿಸತಕ್ಕದ್ದು.

4. ಈ ಅನುಮತಿಯು ಕರ್ನಾಟಕ ಭೂಸುಧಾರಣೆ ಅಧಿನಿಯಮ, 1961ರ ಕಲಂ 109ರನ್ವಯ ವಿನಾಯಿತಿ ಮಾತ್ರವಾಗಿರುತ್ತದೆ. ಬೇರೆ ಕಾನೂನುಗಳ ಉಲ್ಲಂಘನೆಯಾದಲ್ಲಿ ಸಂಬಂಧಿಸಿದ ಕಾಯ್ದೆಯಡಿ ಅಗತ್ಯ ಕ್ರಮ ಜರುಗಿಸಲು ಅವಕಾಶವಿರುತ್ತದೆ.

5. ಈ ಜಮೀನನ್ನು ವ್ಯವಸಾಯದಿಂದ ವ್ಯವಸಾಯೇತರ ಉದ್ದೇಶಕ್ಕಾಗಿ ಪರಿವರ್ತಿಸಿಕೊಳ್ಳಲು ಕರ್ನಾಟಕ ಭೂ ಕಂದಾಯ ಅಧಿನಿಯಮ. 1964ರ ಕಲಂ 95ರಂತೆ ಜಿಲ್ಲಾಧಿಕಾರಿಗಳಿಂದ ಅನುಮತಿ ಪಡೆಯತಕ್ಕದ್ದು.

6. ಸಂಸ್ಥೆ ನಡೆಸುವ ಚಟುವಟಿಕೆಗಳು ಸ್ಥಳೀಯ ಕಾನೂನು, ಕರ್ನಾಟಕ ಮತ್ತು ಭಾರತದ ಕಾನೂನುಗಳನ್ನು ಪಾಲಿಸತಕ್ಕದ್ದು.

7. ಪ್ರಸ್ತಾಪಿತ ಜಮೀನುಗಳಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಮೊದಲು ಜಮೀನಿನ ವಿನ್ಯಾಸಕ್ಕೆ ನಗರ ಯೋಜನಾ ಇಲಾಖೆ/ಅಭಿವೃದ್ಧಿ ಪ್ರಾಧಿಕಾರ/ಸ್ಥಳೀಯ ಪ್ರಾಧಿಕಾರಗಳಿಂದ ಅನುಮೋದನೆ ಪಡೆಯತಕ್ಕದ್ದು.

8. ಮೇಲಿನ ಷರತ್ತುಗಳು ಉಲ್ಲಂಘನೆಯಾದಲ್ಲಿ ಈಗ ನೀಡಲಾಗಿರುವ ಅನುಮತಿಯನ್ನು ಕಾನೂನು ರೀತ್ಯ ರದ್ದುಪಡಿಸಲಾಗುವುದು ಮತ್ತು ಪ್ರಸ್ತಾಪಿತ ಭೂಮಿಯನ್ನು ಋಣಮುಕ್ತವಾಗಿ ಸರ್ಕಾರದಲ್ಲಿ ನಿಹಿತ ಮಾಡಿಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಟಿ.ಎನ್. ನಾರಾಯಣ ಗೌಡ

ಪಿ.ಆರ್. 451

ಸರ್ಕಾರದ ಅಧೀನ ಕಾರ್ಯದರ್ಶಿ

ಕಂದಾಯ ಇಲಾಖೆ (ಭೂ ಸುಧಾರಣೆ)

ತಿದ್ದುಪಡಿ ಆದೇಶ

ಸಂಖ್ಯೆ: ಕಂಇ 42 ಎಲ್‌ಆರ್‌ಎಂ 2008, ಬೆಂಗಳೂರು, ದಿನಾಂಕ: 21ನೇ ಜುಲೈ 2009

ಸರ್ಕಾರದ ಅಧಿಸೂಚನೆ ಸಂಖ್ಯೆ:ಎಲ್‌ಆರ್‌ಎಂ 61/2006 ದಿನಾಂಕ:20.1.2007 ರಲ್ಲಿ ಮೆ: ಇಂಡಿಯನ್ ಕೇನ್ ಪವರ್ ಲಿ., ಬೆಂಗಳೂರು ಇವರಿಗೆ ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ 109(1ಎ) ರಡಿಯಲ್ಲಿ ಒಟ್ಟು 173 ಎಕರೆ 12 ಗುಂಟೆ ಕೃಷಿ ಜಮೀನನ್ನು ಬೀಜ ಸಂಶೋಧನಾ ಕೇಂದ್ರ ಹಾಗೂ ಕಬ್ಬು ಅರೆಯುವ ಕಾರ್ಖಾನೆ ಸ್ಥಾಪಿಸುವ ಉದ್ದೇಶಕ್ಕಾಗಿ ಅನುಮೋದನೆ ನೀಡಲಾಗಿರುವುದನ್ನು ಮಿತಿಗೊಳಪಡಿಸಿ ಅದರಲ್ಲಿಯ 17 ಎಕರೆ 19 ಗುಂಟೆ ಜಮೀನಿಗೆ ಸಂಬಂಧಿಸಿದ ಸರ್ವೆ ನಂಬರುಗಳ ಜಮೀನುಗಳನ್ನು ಈ ಕೆಳಕಂಡಂತೆ ಬದಲಿ ಮಾಡಿ ತಿದ್ದುಪಡಿ ಮಾಡಿ ಆದೇಶಿಸಿದೆ.

ಈಗಾಗಲೇ ಮಂಜೂರಾತಿ ನೀಡಿರುವ ಜಮೀನುಗಳ		ಬದಲಾಗಿ ಮಂಜೂರಾತಿ ನೀಡಿರುವ ಜಮೀನುಗಳ	
ಸ.ನಂ.	ಕ್ಷೇತ್ರ (ಎ.ಗುಂ)	ಸ.ನಂ.	ಕ್ಷೇತ್ರ (ಎ.ಗುಂ)
1. 139/2ಎ	5.00	1. 101/2ಎ	2.25
2. 116/1	1.20	2. 101/2ಬಿ	2.24
3. 117	2.14	3. 107/1ಎ. 1ಬಿ	1.15
4. 141/ಎ	2.13	4. 116/2	2.30
5. 141/ಎ	2.12	5. 31/8	2.29
6. 138/4	4.00	6. 32/8	1.00
	ಒಟ್ಟು=17.19	7. 97/1	4.16
			ಒಟ್ಟು= 17.19

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಟಿ.ಎನ್. ನಾರಾಯಣ ಗೌಡ

ಪಿ.ಆರ್. 452 ಸರ್ಕಾರದ ಅಧೀನ ಕಾರ್ಯದರ್ಶಿ

ಕಂದಾಯ ಇಲಾಖೆ (ಭೂ ಸುಧಾರಣೆ)

ತಿದ್ದುಪಡಿ ಆದೇಶ

ಸಂಖ್ಯೆ:ಆರ್‌ಡಿ 26 ಎಲ್‌ಆರ್‌ಎ 2009, ಬೆಂಗಳೂರು, ದಿನಾಂಕ:29ನೇ ಜುಲೈ 2009

ವಿಷಯ : ಬಳ್ಳಾರಿ ತಾಲ್ಲೂಕು ಭೂ ನ್ಯಾಯ ಮಂಡಳಿ ಸದಸ್ಯರ ಹೆಸರನ್ನು ತಿದ್ದುಪಡಿ ಮಾಡುವ ಬಗ್ಗೆ

ಉಲ್ಲೇಖ : ಸರ್ಕಾರದ ಅಧಿಸೂಚನೆ ಸಂ:ಕಂಇ 26 ಎಲ್‌ಆರ್‌ಎ 2009 ದಿನಾಂಕ:27.2.2009.

ಸರ್ಕಾರದ ಅಧಿಸೂಚನೆ ಸಂಖ್ಯೆ:ಕಂಇ 26 ಎಲ್ ಆರ್ ಎ 2009 ದಿನಾಂಕ:27.2.2009 ರಂದು ಬಳ್ಳಾರಿ ತಾಲ್ಲೂಕು, ಭೂ ನ್ಯಾಯ ಮಂಡಳಿಗೆ ಕ್ರಮ ಸಂಖ್ಯೆ 2ರಲ್ಲಿ ನಾಮ ನಿರ್ದೇಶನ ಮಾಡಿದ್ದ ಶ್ರೀ ಎಂ. ವಿಜಯಕುಮಾರ್ ಗೌಡ ತಂದೆ ಎಂ. ಬಸವನಗೌಡ, ಎಂಬ ಹೆಸರಿಗೆ ಬದಲಾಗಿ "ಶ್ರೀ ಬಿ. ರಂಗಾರೆಡ್ಡಿ ಬಿ. ಪಂಪಾರೆಡ್ಡಿ" ಬೈಲೂರು ಬಳ್ಳಾರಿ ತಾಲ್ಲೂಕು ಎಂದು ತಿದ್ದುಪಡಿ ಮಾಡಿಕೊಂಡು ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಟಿ.ಎನ್. ನಾರಾಯಣ ಗೌಡ

ಪಿ.ಆರ್. 453 ಸರ್ಕಾರದ ಅಧೀನ ಕಾರ್ಯದರ್ಶಿ

ಕಂದಾಯ ಇಲಾಖೆ (ಭೂ ಸುಧಾರಣೆ)

ಅಧಿಸೂಚನೆ

ಸಂಖ್ಯೆ: ಕಂಇ 48 ಎಲ್‌ಆರ್‌ಎಂ 2008, ಬೆಂಗಳೂರು, ದಿನಾಂಕ: 28ನೇ ಜುಲೈ 2009

ಶ್ರೀ ರಾಮಕೃಷ್ಣ ವಿವೇಕಾನಂದ ಆಶ್ರಮ (ರಿ), ಗುಲ್ಬರ್ಗಾ, ಇವರು ಗುಲಬರ್ಗಾ ಜಿಲ್ಲೆ, ಗುಲಬರ್ಗಾ ತಾಲ್ಲೂಕಿನ ತಾಡತೆಗನೂರ ಗ್ರಾಮದ ಸ.ನಂ. 77ರಲ್ಲಿ 04.37 ಎಕರೆ ಕೃಷಿ ಜಮೀನನ್ನು ಶೈಕ್ಷಣಿಕ ಉದ್ದೇಶಕ್ಕಾಗಿ ದಾನ ರೂಪದಲ್ಲಿ ಪಡೆಯಲು ನಮೂನೆ 15–ಎ ಮತ್ತು ನಮೂನೆ 15–ಎಎ, ಗಳಲ್ಲಿನ ಮಾಹಿತಿ ಅನುಸರಿಸಿ ಜಿಲ್ಲಾಧಿಕಾರಿಗಳು, ಗುಲ್ಬರ್ಗಾ ಜಿಲ್ಲೆ, ಇವರ ಪತ್ರ ಸಂಖ್ಯೆ:ಕಂದಾಯ/ ಭೂಸೂ/89/2006–07 ದಿನಾಂಕ:15.4.09ರಲ್ಲಿ ಪ್ರಸ್ತಾಪಿತ ಮೇಲ್ಕಂಡ 04–37 ಎಕರೆ ಜಮೀನನ್ನು ದಾನವಾಗಿ ಪಡೆಯಲು ಕರ್ನಾಟಕ ಭೂಸುಧಾರಣೆ ಅಧಿನಿಯಮ, 1961ರ ಕಲಂ 109 ರಡಿ ಅನುಮೋದನೆ/ವಿನಾಯಿತಿ ನೀಡುವ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾಪಿತ ಜಮೀನು ಖರೀದಿಸಲು ಖಾತೆದಾರರಿಂದ ಕರಾರು ಪತ್ರ ಮಾಡಿಕೊಂಡಿರುತ್ತಾರೆ ಹಾಗೂ ಸದರಿ ಜಮೀನು ಕರ್ನಾಟಕ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ (ಪಿ.ಟಿ.ಸಿ.ಎಲ್) ಅಧಿನಿಯಮ 1978, ಕರ್ನಾಟಕ ಭೂ ಮಂಜೂರಾತಿ ನಿಯಮಾವಳಿಗಳು ಹಾಗೂ ಇನ್ನಿತರ ಪರಭಾರೆ, ನಿಷೇಧ ಕಾಯ್ದೆಗಳ ವ್ಯಾಪ್ತಿಗೆ ಒಳಪಡುವುದಿಲ್ಲ.

ರಾಜ್ಯ ಸರ್ಕಾರವು ಸಾರ್ವಜನಿಕ ಹಿತಾಸಕ್ತಿಯ ಮೇಲೆ ಕಾರಣಗಳನ್ನು ದಾಖಲಿಸಿ ನಿರ್ದಿಷ್ಟ ಉದ್ದೇಶಕ್ಕಾಗಿ ಎಷ್ಟೇ ವಿಸ್ತೀರ್ಣದ ಭೂಮಿಯನ್ನು ಷರತ್ತು ಮತ್ತು ನಿರ್ಬಂಧನೆಗಳನ್ನು ವಿಧಿಸಿ ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961ರ

ಕಲಂ 63, 79ಎ, 79ಬಿ ಅಥವಾ 80ರ ಅವಕಾಶಗಳಿಂದ ವಿನಾಯಿತಿ ನೀಡಲು ಸದರಿ ಅಧಿನಿಯಮದ ಕಲಂ 109(1ಎ) ರಡಿ ಅವಕಾಶ ಕಲ್ಪಿಸಿದೆ.

ಈ ಪ್ರಸ್ತಾವನೆ ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ಅಧಿನಿಯಮ 1995ರ ಕಲಂ 109(1ಎ) ಮತ್ತು ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ನಿಯಮಗಳು, 1996ರ ನಿಯಮ 38–ಬಿ ಮತ್ತು 38–ಸಿ ರಲ್ಲಿನ ಷರತ್ತುಗಳನ್ನು ಪೂರೈಸಿದ್ದು ಕರ್ನಾಟಕ ಭೂ ಸುಧಾರಣೆ ಅಧಿನಿಯಮ 1961ರ ಕಲಂ 63, 79ಎ, 79ಬಿ ಅಥವಾ 80ಕ್ಕೆ ವಿನಾಯಿತಿ ನೀಡಿ ಶ್ರೀ ರಾಮಕೃಷ್ಣ ವಿವೇಕಾನಂದ ಆಶ್ರಮ (ರಿ), ಗುಲ್ಬರ್ಗಾ, ಇವರು ಗುಲಬರ್ಗಾ ಜಿಲ್ಲೆ, ಗುಲಬರ್ಗಾ ತಾಲ್ಲೂಕಿನ ತಾಡತೆಗನೂರ ಗ್ರಾಮದ ಸ.ನಂ. 77ರಲ್ಲಿ 04.37 ಎಕರೆ ಕೃಷಿ ಜಮೀನನ್ನು ಶೈಕ್ಷಣಿಕ ಉದ್ದೇಶಕ್ಕಾಗಿ ದಾನವಾಗಿ ಪಡೆಯಲು ಕರ್ನಾಟಕ ಭೂ ಸುಧಾರಣೆ ಕಾಯ್ದೆ 1961ರ ಕಲಂ 109ರಡಿ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟಂತೆ ಸರ್ಕಾರದ ಅನುಮತಿ ನೀಡಲಾಗಿದೆ.

1 ಯಾವ ಉದ್ದೇಶಕ್ಕಾಗಿ ಜಮೀನನ್ನು ಖರೀದಿಸಲು ಅನುಮತಿ ನೀಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಸದರಿ ಜಮೀನನ್ನು ಎರಡು ವರ್ಷಗಳೊಳಗಾಗಿ ಉಪಯೋಗಿಸತಕ್ಕದ್ದು ಮತ್ತು ಆ ಬಗ್ಗೆ ಜಿಲ್ಲಾಧಿಕಾರಿಗಳ ಮುಖಾಂತರ ಸರ್ಕಾರಕ್ಕೆ ಲಿಖಿತವಾಗಿ ಮಾಹಿತಿ ನೀಡತಕ್ಕದ್ದು.

2. ವಿನಾಯಿತಿ ಪಡೆದವರು ಸರ್ಕಾರ ಅಥವಾ ಯಾವುದೇ ಷೆಡ್ಯೂಲ್ ಬ್ಯಾಂಕ್ ಅಥವಾ ಸಹಕಾರಿ, ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಒಂದಕ್ಕೆ ಅಥವಾ ಕಂಪನಿ ಕಾಯ್ದೆ 1956ರ ಕಲಂ 3ರಲ್ಲಿ ಹೇಳಿರುವಂತೆ ಶೇಕಡ 51 ಪೇಯ್ಡ್ ಆಫ್ ಷೇರು ಬಂಡವಾಳ ಹೊಂದಿದ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದ ನಿಯಂತ್ರಿತ ಅಥವಾ ಎರಡರ ಹಿಡಿತ ಹೊಂದಿರುವ ಸರ್ಕಾರದ ಸಂಘ/ಸಂಸ್ಥೆ ಒಂದಕ್ಕೆ ಖಾತರಿ ನೀಡಿ ಅಡಮಾನ ಹಾಗೂ ಇತರೆ ಹೊಣೆ ಮಾಡಿ ಸಾಲ ಪಡೆಯುವುದನ್ನು ಹೊರತುಪಡಿಸಿ ಸದರಿ ಜಮೀನನ್ನು ನಿಗದಿತ ಉದ್ದೇಶಕ್ಕಲ್ಲದೆ ಬೇರೆ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.

3. ಜಮೀನು ನಗರಾಭಿವೃದ್ಧಿ ಪ್ರಾಧಿಕಾರದ ಸಿ.ಡಿ.ಪಿ/ಒ.ಡಿ.ಪಿ. ವ್ಯಾಪ್ತಿಯೊಳಗೆ ಬಂದರೆ, ಅದರಂತೆ ಅನುಮತಿ ಪಡೆದು ಉಪಯೋಗಿಸತಕ್ಕದ್ದು.

4. ಈ ಅನುಮತಿಯು ಕರ್ನಾಟಕ ಭೂಸುಧಾರಣೆ ಅಧಿನಿಯಮ, 1961ರ ಕಲಂ 109ರನ್ವಯ ವಿನಾಯಿತಿ ಮಾತ್ರವಾಗಿರುತ್ತದೆ. ಬೇರೆ ಕಾನೂನುಗಳ ಉಲ್ಲಂಘನೆಯಾದಲ್ಲಿ ಸಂಬಂಧಿಸಿದ ಕಾಯ್ದೆಯಡಿ ಅಗತ್ಯ ಕ್ರಮ ಜರುಗಿಸಲು ಅವಕಾಶವಿರುತ್ತದೆ.

5. ಈ ಜಮೀನನ್ನು ವ್ಯವಸಾಯದಿಂದ ವ್ಯವಸಾಯೇತರ ಉದ್ದೇಶಕ್ಕಾಗಿ ಪರಿವರ್ತಿಸಿಕೊಳ್ಳಲು ಕರ್ನಾಟಕ ಭೂ ಕಂದಾಯ ಅಧಿನಿಯಮ. 1964ರ ಕಲಂ 95ರಂತೆ ಜಿಲ್ಲಾಧಿಕಾರಿಗಳಿಂದ ಅನುಮತಿ ಪಡೆಯತಕ್ಕದ್ದು.

6. ಸಂಸ್ಥೆ ನಡೆಸುವ ಚಟುವಟಿಕೆಗಳು ಸ್ಥಳೀಯ ಕಾನೂನು, ಕರ್ನಾಟಕ ಮತ್ತು ಭಾರತದ ಕಾನೂನುಗಳನ್ನು ಪಾಲಿಸತಕ್ಕದ್ದು.

7. ಪ್ರಸ್ತಾಪಿತ ಜಮೀನುಗಳಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಮೊದಲು ಜಮೀನಿನ ವಿನ್ಯಾಸಕ್ಕೆ ನಗರ ಯೋಜನಾ ಇಲಾಖೆ/ಅಭಿವೃದ್ಧಿ ಪ್ರಾಧಿಕಾರ/ಸ್ಥಳೀಯ ಪ್ರಾಧಿಕಾರಗಳಿಂದ ಅನುಮೋದನೆ ಪಡೆಯತಕ್ಕದ್ದು.

8. ಮೇಲಿನ ಷರತ್ತುಗಳು ಉಲ್ಲಂಘನೆಯಾದಲ್ಲಿ ಈಗ ನೀಡಲಾಗಿರುವ ಅನುಮತಿಯನ್ನು ಕಾನೂನು ರೀತ್ಯ ರದ್ದುಪಡಿಸಲಾಗುವುದು ಮತ್ತು ಪ್ರಸ್ತಾಪಿತ ಭೂಮಿಯನ್ನು ಋಣಮುಕ್ತವಾಗಿ ಸರ್ಕಾರದಲ್ಲಿ ನಿಹಿತ ಮಾಡಿಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಟಿ.ಎನ್. ನಾರಾಯಣ ಗೌಡ

ಪಿ.ಆರ್. 454

ಸರ್ಕಾರದ ಅಧೀನ ಕಾರ್ಯದರ್ಶಿ

ಕಂದಾಯ ಇಲಾಖೆ (ಭೂ ಸುಧಾರಣೆ)

ಅಧಿಸೂಚನೆ

ಸಂಖ್ಯೆ: ಕಂಇ 386 ಮುನೋಮು 2008, ಬೆಂಗಳೂರು, ದಿನಾಂಕ: 29ನೇ ಜುಲೈ 2009

ಕರ್ನಾಟಕ ಮುದ್ರಾಂಕ ಕಾಯ್ದೆ 1957ರ (1957ರ ಕರ್ನಾಟಕ ಕಾಯ್ದೆ–34) ಅನುಚ್ಛೇದ 37ರನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕೆನರಾ ಬ್ಯಾಂಕ್, ಬೆಂಗಳೂರು ಇವರು ವಿತರಿಸಲಿರುವ ರೂ. 74.00 ಕೋಟಿ ಮೊತ್ತದ ಟಯರ್ –II ಬಾಂಡ್‌ಗಳ ಸೀರೀಸ್ III ಗಳಿಗೆ ರೂ. 2.50 ಕೋಟಿಗಳ ಮೊತ್ತದ ಟಯರ್– II ಬಾಂಡ್‌ಗಳ ಸೀರೀಸ್ V ಗಳಿಗೆ

ಕರ್ನಾಟಕ ಮುದ್ರಾಂಕ ಕಾಯ್ದೆ 1957ರ ಮುದ್ರಾಂಕ ಶುಲ್ಕ ಅನುಸೂಚಿಯ ಅನುಚ್ಛೇದ 16 ರಂತೆ ಅನುಕ್ರಮವಾಗಿ ರೂ. 0.74 ಕೋಟಿ ಮತ್ತು ರೂ. 2.50 ಕೋಟಿ ಒಟ್ಟು ರೂ. 3,24,00,000/– (ಮೂರು ಕೋಟಿ ಇಪ್ಪತ್ನಾಲ್ಕು ಲಕ್ಷ ರೂಪಾಯಿಗಳು ಮಾತ್ರ) ಗಳ ಸಂಚಿತ ಮುದ್ರಾಂಕ ಶುಲ್ಕವನ್ನು ದಿನಾಂಕ:2.12.2008 ರಂದು ಸಂದಾಯಿಸಿರುತ್ತಾರೆಂದು ಕರ್ನಾಟಕ ಸರ್ಕಾರವು ಪ್ರಕಟಿಸುತ್ತದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ:ಕಂಇ 386 ಮುನೋಮು 2008, ದಿನಾಂಕ:29.7.2009ರ ಪ್ರಕಾರ ಸಂಚಿತ ಮುದ್ರಾಂಕ ಶುಲ್ಕವನ್ನು ಮೊದಲ ಬಾರಿಗೆ ಸಂದಾಯಿಸಲಾಗಿದೆ ಎಂಬ ಪದಗಳನ್ನು ಷೇರು ಪತ್ರಗಳ ಮೇಲೆ ಮುದ್ರಿಸಲು ಸರ್ಕಾರವು ಅನುಮತಿ ನೀಡಿದೆ.

ಕರ್ನಾಟಕ ಮುದ್ರಾಂಕ ನಿಯಮಾವಳಿಯಲ್ಲಿನ ನಿಯಮ 11–ಎ (4)ರ ಪ್ರಕಾರ ಸರ್ಕಾರದ ಸಂಬಂಧಪಟ್ಟ ಅಧಿಕಾರಿಗಳು ಷೇರುಗಳ ಖರೀದಿಗೆ ಸಂಬಂಧಿಸಿದಂತೆ ನಿರ್ವಹಿಸಲಾದ ರಿಜಿಸ್ಟರ್ ಪುಸ್ತಕ, ದಾಖಲೆಗಳನ್ನು ಪರಿಶೀಲಿಸಲು ಮತ್ತು ತಪಾಸಣೆ ನಡೆಸಲು ಸದರಿ ಸಂಸ್ಥೆಯು ಅವಕಾಶ ನೀಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಟಿ.ಕೆ. ರಾಮಚಂದ್ರ

ಪಿ.ಆರ್. 455

ಸರ್ಕಾರದ ಅಧೀನ ಕಾರ್ಯದರ್ಶಿ

ಕಂದಾಯ ಇಲಾಖೆ (ನೋಂದಣಿ & ಮುದ್ರಾಂಕ)

ಕಾರ್ಮಿಕ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಕಾಇ 37 ಕಾಬಾನಿ 2008, ಬೆಂಗಳೂರು, ದಿನಾಂಕ: 30ನೇ ಜುಲೈ 2009

ಕಾರ್ಖಾನೆಗಳ ಕಾಯ್ದೆ 1948ರ ಕಲಂ 66 ಉಪ ವಿಧಿ(1)(ಬಿ)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಮೆ: ಜೆ.ಎಸ್.ಡಬ್ಲ್ಯೂ ಸ್ಟೀಲ್ಸ್ ಲಿಮಿಟೆಡ್, ತೋರಣಗಲ್ಲು, ಬಳ್ಳಾರಿ ಜಿಲ್ಲೆ ಈ ಕಾರ್ಖಾನೆಯ ಆಡಳಿತವರ್ಗದವರಿಗೆ ಈ ಕಾರ್ಖಾನೆಯಲ್ಲಿ ಕೆಲಸ ಮಾಡುವ ಮಹಿಳಾ ಕಾರ್ಮಿಕರಿಂದ ಎರಡನೇ ಪಾಳಿಯಲ್ಲಿ ಕೆಲಸ ಮಾಡಿಸಿಕೊಳ್ಳಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಆದೇಶ ಹೊರಡಿಸಿದ ದಿನಾಂಕದಿಂದ ಜಾರಿಗೆ ಬರುವಂತೆ ಅನುಮತಿ ನೀಡಲಾಗಿದೆ.

1. ರಾತ್ರಿ 7.00 ಗಂಟೆಯ ನಂತರ ಕೆಲಸಕ್ಕೆ ನೇಮಿಸಿಕೊಳ್ಳುವ ಪ್ರತಿ ಮಹಿಳಾ ಕಾರ್ಮಿಕರಿಂದ ಲಿಖಿತ ಅನುಮತಿಯನ್ನು ಪಡೆಯುವುದು.
2. ರಾತ್ರಿ 10–00 ಗಂಟೆಯವರೆಗೆ ಕೆಲಸ ನಿರ್ವಹಿಸುವ ಮಹಿಳಾ ಕಾರ್ಮಿಕರನ್ನು ಅವರವರ ಮನೆಗಳಿಗೆ ತಲುಪಿಸಲು ವಾಹನ ಸೌಕರ್ಯವನ್ನು ಒದಗಿಸುವುದು.
3 ಯಾವುದೇ ಸಂದರ್ಭದಲ್ಲಿ ಸಾಯಂಕಾಲ 7–00 ಗಂಟೆಗೆ ಹಾಜರಾಗುವ ಮಹಿಳಾ ಕಾರ್ಮಿಕರಿಗೆ ಕೆಲಸಕ್ಕೆ ಹಾಜರಾಗುವ ಮುನ್ನ ಹಾಗೂ ನಂತರ ಕೊನೆಯ ಪಕ್ಷ– 9–00 ಗಂಟೆ ಕಾಲ ವಿಶ್ರಾಂತಿ ದೊರೆಯುವಂತೆ ನೋಡಿಕೊಳ್ಳುವುದು.
4. ಮಹಿಳಾ ಕಾರ್ಮಿಕರಿಂದ ಯಾವುದೇ ಸಂದರ್ಭದಲ್ಲಿ ಹೆಚ್ಚುವರಿ ಕೆಲಸ ಮಾಡಿಸಬಾರದು.
5. ವಿನಾಯಿತಿ ಅವಧಿಯಲ್ಲಿ ಕೆಲಸ ಮಾಡುವ ಮಹಿಳಾ ಕಾರ್ಮಿಕರಿಗೆ ಶಿಶು ಸಂರಕ್ಷಣೆ ಸೌಲಭ್ಯವನ್ನು ಅವರು ಕೆಲಸ ನಿರ್ವಹಿಸುವವರೆಗೆ ಒದಗಿಸುವುದು.
6. ಮಹಿಳಾ ಕಾರ್ಮಿಕರು ಲೈಂಗಿಕ ಕಿರುಕುಳಕ್ಕೆ ಒಳಗಾಗದಂತೆ ಎಲ್ಲಾ ಮುಂಜಾಗ್ರತಾ ಮತ್ತು ಸುರಕ್ಷತಾ ಕ್ರಮ ಕುರಿತು ಕ್ರಮ ಕೈಗೊಳ್ಳುವುದು.
7. ಸದರಿ ಸೂಚನೆಯನ್ನು ಕಾರ್ಖಾನೆ ನಾಮಫಲಕದಲ್ಲಿ ಪ್ರದರ್ಶಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಬಿ. ಶಿವರಾಮ ಗೌಡ

ಪಿ.ಆರ್. 457

ಸರ್ಕಾರದ ಅಧೀನ ಕಾರ್ಯದರ್ಶಿ

ಕಾರ್ಮಿಕ ಇಲಾಖೆ (ಕಾರ್ಖಾನೆ ಮತ್ತು ಬಾಯ್ಲರುಗಳು)

ಸಹಕಾರ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಒ 61 ಸಿಎನ್‌ಎಸ್ 2008, ಬೆಂಗಳೂರು, ದಿನಾಂಕ: 30ನೇ ಜುಲೈ 2009

ಈ ಹಿಂದೆ ಸರ್ಕಾರದಿಂದ ಮಾಡಿರುವ ಎಲ್ಲಾ ನಾಮನಿರ್ದೇಶನಗಳನ್ನು ರದ್ದುಪಡಿಸಿ, ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 (1959ರ ಕರ್ನಾಟಕ ಅಧಿನಿಯಮ ಸಂಖ್ಯೆ 11) ರ ಪ್ರಕರಣ 29ರ ಉಪ ಪ್ರಕರಣ (1)ರ ಮೇರೆಗೆ ದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಕೆಳಕಂಡ ವ್ಯಕ್ತಿಗಳನ್ನು ಕರ್ನಾಟಕ ರಾಜ್ಯ ಸಹಕಾರ ಮೀನುಗಾರಿಕಾ ಮಹಾಮಂಡಳ ನಿ., ಸರಸ್ವತಿಪುರಂ, ಮೈಸೂರು ಇದರ ಆಡಳಿತ ಮಂಡಳಿಗೆ ಸದಸ್ಯರನ್ನಾಗಿ ಈ ಕೂಡಲೇ ಜಾರಿಗೆ ಬರುವಂತೆ ನಾಮನಿರ್ದೇಶನ ಮಾಡುತ್ತದೆ. ಹೀಗೆ ನಾಮನಿರ್ದೇಶನಗೊಂಡ ಸದಸ್ಯರ ಪದಾವಧಿಯು ಚುನಾಯಿತ ಸಮಿತಿಯ ಪದಾವಧಿಯು ಮುಕ್ತಾಯವಾಗುವವರೆಗೆ ಅಥವಾ ಸರ್ಕಾರದ ಮುಂದಿನ ಆದೇಶದವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಜಾರಿಯಲ್ಲಿರುತ್ತದೆ.

1. ಶ್ರೀ ಕೆ.ಎನ್. ಬಸವರಾಜ್, ಕೂಲಂಬಿ ಗ್ರಾಮ ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ

2. ಡಾ: ಶಿವರಾಮ ಬಿನ್ ಲೇ: ಜವರಯ್ಯ. ನಂ. EWS-184, "ಶಿವಾಕೃಪಾ" 1ನೇ ಹಂತ, ಕುವೆಂಪುನಗರ, ಮೈಸೂರು.

3. ಶ್ರೀಮತಿ ಮಂಜುಳಾ ಕೋಂ ಪುಟ್ಟಪ್ಪ, ಭಾರತೀನಗರ, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಆರ್.ಎಸ್. ಹುಚ್ಚಾಚಾರಿ

ಪಿ.ಆರ್. 461

ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ,
ಸಹಕಾರ ಇಲಾಖೆ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಮಮಇ 179 ಪಿಎಚ್‌ಪಿ 2009, ಬೆಂಗಳೂರು, ದಿನಾಂಕ: 14ನೇ ಜುಲೈ 2009

ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಪಾರದರ್ಶಕತೆ ಅಧಿನಿಯಮ 1999 ನಿಯಮಗಳು 2000ದ ಅನ್ವಯ ಪ್ರದತ್ತವಾದ ಅಧಿಕಾರದ ಅಡಿಯಲ್ಲಿ 2009–10ನೇ ಸಾಲಿನಲ್ಲಿ ಗಣಕಯಂತ್ರ ಆಧಾರದ ಮತ್ತು ವೃತ್ತಿ ತರಬೇತಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಮಂಜೂರಾತಿ ನೀಡುವ ಟೆಂಡರ್ ಪ್ರಕ್ರಿಯೆಗೆ ಸಂಬಂಧಿಸಿದಂತೆ ಅಧಿನಿಯಮ ಕಲಂ 7ರಂತೆ ಉಪಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರನ್ನು ರಾಜ್ಯ ಟೆಂಡರ್ ಬುಲೆಟಿನ್ ಅಧಿಕಾರಿಯನ್ನಾಗಿ ಹಾಗೂ ಸದರಿ ಅಧಿನಿಯಮದ ಕಲಂ 9ರ (i)(ii) ರಂತೆ ನಿರ್ದೇಶಕರು, ಅಂಗವಿಕಲರ ಹಾಗೂ ಹಿರಿಯ ನಾಗರೀಕರ ಕಲ್ಯಾಣ ಇಲಾಖೆ ಇವರನ್ನು ಟೆಂಡರ್ ಆಹ್ವಾನಿಸುವ ಮತ್ತು ಟೆಂಡರ್ ಅಂಗೀಕರಿಸುವ ಪ್ರಾಧಿಕಾರವನ್ನಾಗಿ ನೇಮಿಸಲಾಗಿದೆ.

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ನಿಯಮಗಳು 2000ದ ಕಲಂ 17(2) ರಂತೆ ಟೆಂಡರ್ ಬುಲೆಟಿನ್‌ನಲ್ಲಿ ಟೆಂಡರ್ ನೋಟೀಸ್ ಆಹ್ವಾನಿಸುವ ಪ್ರಕಟಣೆ ದಿನಾಂಕ ಮತ್ತು ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕದ ನಡುವೆ ಕನಿಷ್ಟ 60 ದಿನಗಳ ಸಮಯ ನೀಡಬೇಕಾಗಿದ್ದು, ಸದರಿ ನಿಯಮದಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಟೆಂಡರ್ ಬುಲೆಟಿನ್‌ನಲ್ಲಿ ಟೆಂಡರ್ ನೋಟೀಸ್ ಆಹ್ವಾನಿಸುವ ಪ್ರಕಟಣೆ ದಿನಾಂಕ ಮತ್ತು ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕವನ್ನು 30 ದಿನಗಳಿಗೆ ಮಿತಿಗೊಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಆರ್. ನರಸಿಂಹಯ್ಯ

ಪಿ.ಆರ್. 462

ಸರ್ಕಾರದ ಅಧೀನ ಕಾರ್ಯದರ್ಶಿ–2 [ಪ್ರಭಾರ]
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ